ಕರ್ನಾಟಕ ಸರ್ಕಾರ

ಆಗಸ್ಟ್ 7, 2017

# ಬಡ್ತಿಯಲ್ಲಿ ಮೀಸಲಾತಿ : ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ನೌಕರರ ಹಿತ ರಕ್ಷಣೆಗೆ ಸುಗ್ರೀವಾಜ್ಞೆ ತರಲು ಸಂಪುಟ ತೀರ್ಮಾನ

ಬೆಂಗಳೂರು, ಆಗಸ್ಟ್ 7:

ಬಡ್ತಿಯಲ್ಲಿ ಮೀಸಲಾತಿ ಕುರಿತಂತೆ ಭಾರತ ಸರ್ವೋಚ್ಛ ನ್ಯಾಯಾಲಯವು ಪ್ರಕಟಿಸಿದ ಬಿ. ಕೆ. ಪವಿತ್ರ ಪ್ರಕರಣದ ತೀರ್ಪಿನಿಂದ ಹಿಂಬಡ್ತಿಯ ಭೀತಿ ಹಾಗೂ ಮುಜುಗುರದ ಪರಿಸ್ಥಿತಿ ಎದುರಿಸುತ್ತಿದ್ದ ರಾಜ್ಯ ಸರ್ಕಾರಿ ಸೇವೆಯಲ್ಲಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ನೌಕರರ ಹಿತ ರಕ್ಷಣೆಗೆ ಮುಂದಾಗಿರುವ ರಾಜ್ಯ ಸಚಿವ ಸಂಪುಟವು ಸಧ್ಯದಲ್ಲೇ ಸುಗ್ರೀವಾಜ್ಞೆ ಹೊರಡಿಸಲು ತೀರ್ಮಾನಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ನಡೆದ ಸಂಪುಟ ಸಭೆಯ ನಂತರ ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ. ಬಿ. ಜಯಚಂದ್ರ ಅವರು ಈ ವಿಷಯವನ್ನು ಪತ್ರಿಕಾಗೋಷ್ಠಿಯಲ್ಲಿ ಪ್ರಕಟಿಸಿದರು.

ನಾಗರೀಕ ಸೇವೆಗಳಲ್ಲಿ ರೋಸ್ಟರ್ ಪದ್ಧತಿಯನ್ನು ಅನುಸರಿಸಿ ಮೀಸಲಾತಿ ಒದಗಿಸುತ್ತಿರುವ ರಾಜ್ಯ ಸರ್ಕಾರದ ಕ್ರಮವನ್ನು ಭಾರತ ಸರ್ವೋಚ್ಛ ನ್ಯಾಯಾಲಯದಲ್ಲಿ ಪ್ರಶ್ನಿಸಿದ್ದ ಬಿ ಕೆ ಪವಿತ್ರ ಮತ್ತು ಇತರರ ಪ್ರಕರಣದಲ್ಲಿ ಹೊರ ಹೊಮ್ಮಿದ ತೀರ್ಪಿನ ಅನುಷ್ಠಾನದ ಸಾಧಕ-ಬಾಧಕಗಳ ಬಗ್ಗೆ ಅಪರ ಮುಖ್ಯ ಕಾರ್ಯದರ್ಶಿ ಕೆ ರತ್ನಪ್ರಭಾ ಅವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯ ಅಧ್ಯಯನ ಹಾಗೂ ಪರಿಶೀಲನೆ ನಡೆಸಿದ ಸಂಪುಟ ಉಪ ಸಮಿತಿಯ ಅಭಿಪ್ರಾಯ, ತೀರ್ಪಿನಲ್ಲಿ ಅಡಕವಾಗಿರುವ ಅಂಶಗಳ ಕುರಿತಂತೆ ಭಾರತ ಸರ್ವೋಚ್ಛ ನ್ಯಾಯಾಲಯದ ನಿವೃತ್ತ ಮುಖ್ಯ ನ್ಯಾಯಮೂರ್ತಿ ಟಿ. ಎಸ್. ಠಾಕೂರ್ ಮತ್ತು ಅದೇ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶ ವಿ. ಗೋಪಾಲ ಗೌಡ ಅವರ ಶಿಫಾರಸ್ಸುಗಳು ಹಾಗೂ ರಾಜ್ಯ ಕಾನೂನು ಆಯೋಗದ ಸಲಹೆ ಪಡೆದ ರಾಜ್ಯ ಸಚಿವ ಸಂಪುಟವು ಈ ಬಗ್ಗೆ ಸುದೀರ್ಘ ಚರ್ಚೆ ನಡೆಸಿ, ರಾಜ್ಯ ಸರ್ಕಾರಿ ಸೇವೆಯಲ್ಲಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ನೌಕರರ ಹಿತ ರಕ್ಷಿಸಲು ಸುಗ್ರೀವಾಜ್ಞೆ ಹೊರಡಿಸಲು ನಿರ್ಧರಿಸಿದೆ.

ಸುಗ್ರೀವಾಜ್ಞೆ ಹೊರಡಿಸಬೇಕೆಂದು ತೀರ್ಮಾನಿಸುವ ಮುನ್ನ, ಸಂವಿಧಾನದ ಪರಿಚ್ಛೇಧ 16 (4) (ಎ) ಅನುಗುಣವಾಗಿ ಪ್ರಾತಿನಿಧ್ಯದ ಕೊರತೆ, ಹಿಂದುಳಿದಿರುವಿಕೆ ಹಾಗೂ ಒಟ್ಟಾರೆ ಸಾಮರ್ಥ್ಯವನ್ನು ಗಣನೆಗೆ ತೆಗೆದುಕೊಳ್ಳಬೇಕೆಂಬ ಪರಿಣಾಮಕಾರಿ ಹಿರಿತನವನ್ನು ನಿಗದಿಪಡಿಸಬೇಕೆಂಬ ಬಿ ಕೆ ಪವಿತ್ರ ಪ್ರಕರಣ ಹಾಗೂ ಎಂ ನಾಗರಾಜ್ ಪ್ರಕರಣ – ಹೀಗೆ ಎರಡೂ ಪ್ರಕರಣಗಳಲ್ಲಿನ ಅಂಶಗಳನ್ನು ಸಂಪುಟ ಪರಾಮರ್ಶಿಸಿದೆ.

ಅಲ್ಲದೆ, ಸೂಪರ್ ನ್ಯೂಮರೆರಿ ಹುದ್ದೆಗಳನ್ನು ಸೃಜಿಸಿ ಈಗಾಗಲೇ ಬಡ್ತಿ ಪಡೆದಿರುವ ನೌಕರರ ಹಿತ ಕಾಯಲು ಸಂಪುಟ ನಿರ್ಧರಿಸಿದೆ. ಅಂದರೆ, ಪ್ರಸ್ತುತದಲ್ಲಿ ಪದೋನ್ನತಿ ಪಡೆದಿರುವ ನೌಕರರು ನಿವೃತ್ತಿಯಾಗುವವರೆಗೂ ಅದೇ ಹುದ್ದೆಯಲ್ಲಿ ಮುಂದುವರೆಯುತ್ತಾರೆ. ಅಂತೆಯೇ, ಆ ನೌಕರರು ನಿವೃತ್ತಿಯಾದ ನಂತರ ಆ ಹುದ್ದೆ ತಂ–ತಾನೇ ರದ್ದಾಗುತ್ತದೆ. ಒಟ್ಟಾರೆ, ಬಡ್ತಿ ಪಡೆದ ನೌಕರರ ಹಿತಕ್ಕೆ ಯಾವುದೇ ಧಕ್ಕೆಯಾಗುವುದಿಲ್ಲ. ಜಲ ಸಂಪನ್ಮೂಲ, ಲೋಕೋಪಯೋಗಿ ಹಾಗೂ ಇಂಧನ ಇಲಾಖೆಯಲ್ಲಿ ಇಂತಹ ಪ್ರಕರಣಗಳು ಹೆಚ್ಚಿವೆ ಎಂದು ಸಚಿವರು ತಿಳಿಸಿದರು.

## ಸಾಂಸ್ಕೃತಿಕ ನೀತಿಗೆ ಅನುಮೋದನೆ

ಕನ್ನಡ ನಾಡು–ನುಡಿಯ ರಕ್ಷಣೆಗೆ ಪೂರಕವಾಗುವಂತೆ ಸಾಂಸ್ಕೃತಿಕ ನೀತಿ ಜಾರಿಗೆಗೊಳಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ. ಹೆಸರಾಂತ ಸಾಹಿತಿ ಡಾ ಬರಗೂರು ರಾಮಚಂದ್ರಪ್ಪ ಅವರು ಸಿದ್ಧಪಡಿಸಿದ ನೀತಿಯ ಅನುಷ್ಠಾನಕ್ಕೆ ಹೆಚ್ ಕೆ ಪಾಟೀಲ್ ಅವರ ಅಧ್ಯಕ್ಷತೆಯ ಉಪ ಸಮಿತಿಯ ಶಿಫಾರಸ್ಸಿನಂತೆ 59.68 ಕೋಟಿ ರೂ ಬೇಡಿಕೆಗೆ ಪ್ರತಿಯಾಗಿ 36.68 ಕೋಟಿ ರೂ ಬಿಡುಗಡೆಗೆ ಸಂಪುಟ ಸಮ್ಮತಿಸಿದೆ.

ಶಿಷ್ಯ ವೇತನ (ಸ್ಕಾಲರ್‌ಷಿಪ್) ಹಾಗೂ ಫೆಲೋಷಿಪ್, ರಂಗಮಂದಿರಗಳ ನಿರ್ಮಾಣ, ಐತಿಹಾಸಿಕ ಪ್ರದೇಶಗಳಲ್ಲಿ ಉತ್ಸವಗಳು ಹಾಗೂ ಪ್ರವಾಸೀ ತಾಣಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ, ಕಲಾಗ್ರಾಮಗಳ ಸ್ಥಾಪನೆ, ಕಲಾಕೃತಿಗಳ ಪ್ರದರ್ಶನ ಮತ್ತು ಮಾರಾಟಕ್ಕೆ ಕಲಾ ಸಂತೆಗಳ ವಿನ್ಯಾಸ ಮತ್ತು ರಚನೆ, ಬುಡಕಟ್ಟು ವಿಶ್ವವಿದ್ಯಾಲಯ ಹಾಗೂ ಪಾಲಿ–ಪ್ರಾಕೃತ ಭಾಷಾ ಅಧ್ಯಯನ ಕೇಂದ್ರ ಸ್ಥಾಪನೆಯ ಶಿಫಾರಸ್ಸುಗಳಿರುವ ಸಾಂಸ್ಕೃತಿಕ ನೀತಿಯನ್ನು ಜಾರಿಗೊಳಿಸಲು ಸಂಪುಟ ಒಪ್ಪಿಗೆ ನೀಡಿದೆ.

## ಜಾನುವಾರು ಲಸಿಕೆ ಉತ್ಪಾದನಾ ಘಟಕ

ಜಾನುವಾರುಗಳಿಗೆ ಬರುವ ಕಾಲುಬಾಯಿ ರೋಗ ತಡೆಗೆ ಲಸಿಕೆ ತಯಾರಿಸುವ ನೂತನ ಉತ್ಪಾದನಾ ಘಟಕವನ್ನು ಬೆಂಗಳೂರಿನ ಹೆಬ್ಬಾಳದಲ್ಲಿರುವ ಇನ್‌ಸ್ಟಿಟ್ಯೂಟ್ ಆಫ್ ಅನಿಮಲ್ ಹೆಲ್ತ್

ಅಂಡ್ ವೆಟರಿನರಿ ಬಯಾಲಾಜಿಕಲ್ಸ್ ಆವರಣದಲ್ಲಿ ಒಂದು ನೂರು ಕೋಟಿ ರೂ ವೆಚ್ಚದಲ್ಲಿ ಸ್ಥಾಪಿಸಲು ಸಂಪುಟ ಒಪ್ಪಿಗೆ ನೀಡಿದೆ. ರಾಜ್ಯದಲ್ಲಿ ಜಾನುವಾರುಗಳಿಗೆ ಕಾಲುಬಾಯಿ ರೋಗದ ವಿರುದ್ಧ ಲಸಿಕೆಯನ್ನು ವರ್ಷಕ್ಕೆ ಎರಡು ಬಾರಿ ಹಾಕಲಾಗುತ್ತಿದೆ. ಆದರೆ, ಲಸಿಕೆಗಳನ್ನು ಖಾಸಗಿ ಸಂಸ್ಥೆಗಳಿಂದ ಖರೀದಿಸಬೇಕಾಗಿತ್ತು. ಇಷ್ಟಾದರೂ ಲಸಿಕೆಗಳು ಸಕಾಲದಲ್ಲಿ ದೊರೆಯುತ್ತಿರಲಿಲ್ಲ. ರಾಜ್ಯದ ಒಳಗೂ ಹಾಗೂ ಹೊರಗೂ ಅತೀ ಹೆಚ್ಚು ಬೇಡಿಕೆ ಇರುವ ಲಸಿಕೆಗಳನ್ನು ಗೆರಸು ರಾಸುಗಳಿಗೆ ಹಾಕಲು ಅನುಕೂಲವಾಗುವಂತೆ ಸರ್ಕಾರವೇ ಇದೀಗ ಲಸಿಕೆಯ ಉತ್ಪಾದನೆಗೆ ಕ್ರಮ ವಹಿಸಲಾಗಿದೆ.

**ಕಸಾಯಿಖಾನೆಗೆ ಅನುಮೋದನೆ**

ರಾಜ್ಯದ ನಾಲ್ಕು ಕಂದಾಯ ವಿಭಾಗದಲ್ಲಿ 29 ಕೋಟಿ ರೂ. ವೆಚ್ಚದಲ್ಲಿ ನಾಲ್ಕು ಅತ್ಯಾಧುನಿಕ ಕಸಾಯಿ ಖಾನೆಯನ್ನು ಆರಂಭಿಸಲು ಸಂಪುಟ ನಿರ್ಧರಿಸಿದೆ. ಪ್ರಥಮ ಹಂತದಲ್ಲಿ ಬೆಂಗಳೂರು ವಿಭಾಗದಲ್ಲಿ ಕೋಲಾರ ಜಿಲ್ಲೆಯ ಮುಳಬಾಗಿಲು ತಾಲ್ಲೂಕಿನ ಬೈರಕೂರು ಹೋಬಳಿಯ ಮತ್ತು ಬೆಳಗಾವಿ ವಿಭಾಗ ಮಟ್ಟದಲ್ಲಿ ಹಿರೇ ಬಾಗೇವಾಡಿಯಲ್ಲಿ ತಲಾ 7.25 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲು ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

**ಕಬ್ಬಿಣ ಅದಿರು ಗಣಿಗಾರಿಕೆಗೆ ನೂತನ ಕ್ರಿಯಾ ಯೋಜನೆ**

ಕಬ್ಬಿಣ ಅದಿರು ಗಣಿಗಾರಿಕೆ ಕುರಿತ ಮುಂದಿನ 15 ವರ್ಷಗಳವರೆಗಿನ ನೂತನ ಕ್ರಿಯಾ ಯೋಜನೆಗೆ ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ. ರಾಜ್ಯದಲ್ಲಿರುವ ಅದಿರು ನಿಕ್ಷೇಪವನ್ನು ಉಕ್ಕು ಕಾರ್ಖಾನೆಗಳಿಗೆ ಮಾತ್ರ ನೀಡಬೇಕೆಂಬ ಕೇಂದ್ರದ ಮಾರ್ಗಸೂಚಿಯ ಅನ್ವಯ ಮುಂದಿನ 15 ವರ್ಷಗಳ ಅವಧಿಗೆ ಕ್ರಿಯಾ ಯೋಜನೆಯನ್ನು ಭೂಗರ್ಭ ಇಲಾಖೆ ಸಿದ್ದಪಡಿಸಿದ್ದು ಅದಕ್ಕೆ ರಾಜ್ಯ ಸಚಿವ ಸಂಪುಟ ಸಮ್ಮತಿಸಿದೆ. ತುಮಕೂರು, ಚಿತ್ರದುರ್ಗ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಕ್ಷಿಪ್ರ ಅದಿರು ನಿಕ್ಷೇಪ ಪತ್ತೆಗೆ ಸರ್ಕಾರಿ ಸ್ವಾಮ್ಯದ ಮಿನರಲ್ ಎಕ್ಸಪ್ಲೋರೇಷನ್ ಕಾರ್ಪೋರೇಷನ್ ಲಿಮಿಟೆಡ್‌ನ ನೆರವು ಪಡೆಯಲು ಸಂಪುಟ ಸಮ್ಮತಿಸಿದೆ.

ಕೇಂದ್ರ ಸರ್ಕಾರಿ ಸ್ವಾಮ್ಯದ ವಿಶ್ವೇಶ್ವರಯ್ಯ ಉಕ್ಕು ಕಾರ್ಖಾನೆಗೆ ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ರಮಣದುರ್ಗ ಬ್ಲಾಕ್‌ನ ವ್ಯಾಪ್ತಿಯಲ್ಲಿ 150 ಎಕರೆ ಪ್ರದೇಶವನ್ನು ಮೀಸಲಿಡಲು ಸಚಿವ ಸಂಪುಟ ಅನುಮೋದನೆ ನೀಡಿದೆ.

**ಹೆಚ್ ಎ ಎಲ್ ಗೆ ನೀರು ಹಂಚಿಕೆ**

ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲುಕಿನ ನಿಟ್ಟೂರು ಹೋಬಳಿಯ ಬಿದರಹಳ್ಳಿ ಕಾವಲ್‌ನಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಹೆಚ್. ಎ. ಎಲ್ ಸಂಸ್ಥೆಯ ಹೆಲಿಕ್ಯಾಪ್ಟರ್ ಘಟಕಕ್ಕೆ ಕಡಬಕೆರೆಯಿಂದ ನೀರು ಹಂಚಿಕೆ ಮಾಡಲು ಸಂಪುಟ ಅನುಮೋದನೆ ನೀಡಿದೆ. ಈ ಸಂಸ್ಥೆಯ ಸುಮಾರು 610 ಎಕರೆ ಪ್ರದೇಶಕ್ಕೆ ಹೇಮಾವತಿ ನದಿಯಿಂದ 43.77 ಎಂ ಸಿ ಎಫ್ ನೀರು ಉಪಯೋಗಿಸಲು ಸಂಪುಟ ಒಪ್ಪಿಗೆ ನೀಡಿದೆ.

**ಖಾಯಂಪೂರ್ವ ಅವಧಿ ಘೋಷಣೆಯಾಗದವರಿಗೂ ಪಿಂಚಣಿ**

ಕರ್ನಾಟಕ ಆಡಳಿತ ನ್ಯಾಯಾಧಿಕರಣದ ಸೂಚನೆಯ ಮೇರೆಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆಯಲ್ಲಿ ಸೇವೆ ಸಲ್ಲಿಸಿ ಕನ್ನಡ ಭಾಷೆ ಪರೀಕ್ಷೆಯಲ್ಲಿ ತೇರ್ಗಡೆ ಹೊಂದದೆ ಹಾಗೂ ಖಾಯಂ ಪೂರ್ವ ಅವಧಿ ಘೋಷಣೆ ಆಗದೆ ನಿವೃತ್ತಿ ಹೊಂದಿದ ಎಂಟು ಜನ ಸಿಬ್ಬಂದಿಗೆ ನಿವೃತ್ತಿ ಪಿಂಚಣಿ ನೀಡಲು ಸಂಪುಟ ಒಪ್ಪಿಗೆ ನೀಡಿದೆ.

**ಕಾಶಲ್ಯ ವಿಕಾಸಕ್ಕೆ ಒಪ್ಪಿಗೆ**

ಪರಿಷ್ಕೃತ ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ್ ಯೋಜನೆ ಅಡಿ ರಾಜ್ಯದಲ್ಲಿ ಎರಡು ಹೊಸ ಯೋಜನೆಗೆ ಸಂಪುಟ ಒಪ್ಪಿಗೆ ನೀಡಿದೆ.

**ಪರಿಷ್ಕೃತ ಮೊತ್ತಕ್ಕೆ ಅನುಮೋದನೆ**

ತುಮಕೂರು ಜಿಲ್ಲೆಯ ಶಿರಾ ನಗರಸಭೆ ವ್ಯಾಪ್ತಿಯ ಎರಡನೇ ಹಂತ ಯೋಜನೆಯಡಿ ಕೈಗೆತ್ತಿಕೊಂಡಿರುವ 24.21 ಕೋಟಿ ರೂ ವೆಚ್ಚದ ಕಾಮಗಾರಿಗಳ ಪರಿಷ್ಕೃತ ಮೊತ್ತಕ್ಕೆ ಸಂಪುಟವು ಆಡಳಿತಾತ್ಮಕ ಅನುಮೋದನೆ ನೀಡಿದೆ.

**ಏಳು ನೀರಾವರಿ ಯೋಜನೆಗಳಿಗೆ ಅನುಮೋದನೆ**

ರಾಜ್ಯದ ಏಳು ನೀರಾವರಿ ಯೋಜನೆಗಳಿಗೆ ಬ್ಯಾರೇಜು, ಬಾಂದಾರ ನಿರ್ಮಾಣ ಮಾಡುವ ಕಾಮಗಾರಿಗೆ ಸಚಿವ ಸಂಪುಟ ಸಮ್ಮತಿ ನೀಡಿದೆ. ಮಾಂಜ್ರಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಮಾಣಿಕೇಶ್ವರ ಬ್ಯಾರೇಜಿನಿಂದ 1.119 ಟಿ. ಎಂ. ಸಿ. ಹಾಗೂ ಹಾಲಳ್ಳಿ ಬ್ಯಾರೇಜಿನಿಂದ 1.050 ಟಿ. ಎಂ. ಸಿ. ಪ್ರಮಾಣದ ನೀರನ್ನು ಎತ್ತಿ ಕಾರಂಜ ಬಲದಂಡೆ ಕಾಲುವೆಯ

ಅಂಚಿನ ವ್ಯಾಪ್ತಿಯಲ್ಲಿರುವ ಅಚ್ಚುಕಟ್ಟು ಪ್ರದೇಶಗಳಿಗೆ 126.85 ಕೋಟಿ ರೂ. ಅಂದಾಜು ವೆಚ್ಚದ ಯೋಜನೆಗೆ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

**ಹದಿನೈದು ಕರೆಗಳಿಗೆ ನೀರು ತುಂಬುವ ಕಾಮಗಾರಿಗಳಿಗೆ ಸಂಪುಟ ಒಪ್ಪಿಗೆ**

ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನ ಜಮಖಂಡಿ ಗ್ರಾಮದ ಬಳಿ ಮಾಂಜ್ರಾ ನದಿಗೆ ಅಡ್ಡಲಾಗಿ ನಿರ್ಮಿಸಲಿರುವ ಕೊಂಗಳಿ ಬ್ಯಾರೇಜಿನಿಂದ ನೀರನ್ನು ಎತ್ತಿ ಚುಲ್ಕಿನಾಲಾ ಜಲಾಶಯ ಮತ್ತು ಬಸವಕಲ್ಯಾಣ ತಾಲ್ಲೂಕಿನ 15 ಕೆರೆಗಳಿಗೆ 188 ಕೋಟಿ ರೂ. ಅಂದಾಜು ವೆಚ್ಚದಲ್ಲಿ ನೀರು ತುಂಬಿಸುವ ಕಾಮಗಾರಿಗೆ ಸಂಪುಟ ಒಪ್ಪಿಗೆ ನೀಡಿದೆ.

ತುಂಗಭದ್ರಾ ನದಿಯಿಂದ ಬಳ್ಳಾರಿ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಮಾಲ್ವಿ ಜಲಾಶಯಕ್ಕೆ ಅಂದಾಜು 144.95 ಕೋಟಿ ರೂ. ವೆಚ್ಚದಲ್ಲಿ ನೀರು ತುಂಬಿಸುವ ಕಾಮಗಾರಿಗೆ ಸಂಪುಟ ಸಭೆ ಸಮ್ಮತಿ ನೀಡಿದೆ.

ಧಾರವಾಡ ಜಿಲ್ಲೆಯ ಕಲಘಟಗಿ ತಾಲ್ಲೂಕಿನ 35 ಸಣ್ಣ ನೀರಾವರಿ ಕೆರೆಗಳಿಗೆ ಬೆಳವಂತರ ಗ್ರಾಮದ ಹತ್ತಿರ ಬೇಡ್ತಿ ನದಿಯಿಂದ 0.449 ಟಿ.ಎಂ.ಸಿ. ನೀರನ್ನು ಬಳಸಿಕೊಂಡು ಏತ ನೀರಾವರಿ ಮೂಲಕ 125 ಕೋಟಿ ರೂ. ಅಂದಾಜು ವೆಚ್ಚದಲ್ಲಿ ನೀರು ತುಂಬಿಸಲು ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಮಲಪ್ರಭಾ ಮುಖ್ಯ ಕಾಲುವೆ ಹಾಗೂ ವಿತರಣಾ ಕಾಲುವೆಯ 1,120 ಕೋಟಿ ರೂ. ವೆಚ್ಚದಲ್ಲಿ ಆಧುನೀಕರಣ ಕಾಮಗಾರಿ ಕೈಗೆತ್ತಿಕೊಳ್ಳಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ತುಮಕೂರು ಜಿಲ್ಲೆಯ ಕುಣಿಗಲ್ಲ ತಾಲ್ಲುಕೀನ ಮಾರ್ಕೋನಹಳ್ಳಿ ಜಲಾಶಯದ ಎಡದಂಡೆ ನಾಲೆಯ ಆಧುನೀಕರಣದ ಕಾಮಗಾರಿ ಹಾಗೂ ಬಲದಂಡೆ ನಾಲೆ ಆಧುನೀಕರಣಕ್ಕೆ 66 ಕೋಟಿ ರೂ ಅಂದಾಜು ವೆಚ್ಚದ ಯೋಜನೆಗೆ ಸಚಿವ ಸಂಪುಟ ಅನುಮತಿ ನೀಡಿದೆ.

ಹಾರೋಹಳ್ಳಿ ಮೇಲ್ಮಟ್ಟದ ನಾಲೆಯ ಆಧುನೀಕರಣ ಕಾಮಗಾರಿಯನ್ನು 27.80 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

## ಸಂಗೊಳ್ಳಿ ರಾಯಣ್ಣ ಪ್ರಾಧಿಕಾರಕ್ಕೆ ಮಂಜೂರಾದ ಭೂಮಿ ಹಸ್ತಾಂತರಿಸಲು ಸಂಪುಟ ಒಪ್ಪಿಗೆ

ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಸಂಗೊಳ್ಳಿ ಗ್ರಾಮದಲ್ಲಿ 100 ಎಕರೆ ಜಾಗದಲ್ಲಿ ಹಿಂದುಳಿದ ವರ್ಗದವರ ಕಲ್ಯಾಣ ಇಲಾಖೆಗೆ ಭೂಮಿ ಮಂಜೂರು ಮಾಡಿದೆ. ಸಂಗೊಳ್ಳಿ ರಾಯಣ್ಣ ಶೌರ್ಯ ಅಕಾಡೆಮಿ ಸ್ಥಾಪನೆ ಮಾಡಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

## ಪ್ರತಿ ಖಾತರಿಗೆ ಒಪ್ಪಿಗೆ

ರಾಷ್ಟ್ರೀಯ ಹಿಂದುಳಿದ ವರ್ಗಗಳ ಹಣಕಾಸು ಮತ್ತು ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿನಲ್ಲಿ ರಾಜ್ಯದ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಫಲಾನುಭವಿಗಳಿಗೆ ಸಾಲ ಸೌಲಭ್ಯ ಕಲ್ಪಿಸಲು 10 ಕೋಟಿ ರೂ. ಸಾಲ ಪಡೆಯುವ ಯೋಜನೆಗೆ ರಾಜ್ಯ ಸರ್ಕಾರ ಪ್ರತಿ ಖಾತರಿಗೆ ಒಪ್ಪಿಗೆ ನೀಡಿದೆ.

## ಆರು ಅಧಿಕಾರಿಗಳ ಕಡ್ಡಾಯ ನಿವೃತ್ತಿ

ಶಿವಮೊಗ್ಗದ ಶಿವಪ್ಪ ನಾಯಕ ಅರಮನೆ ಹಾಗೂ ಉಡುಪಿ ಜಿಲ್ಲೆಯ ಸುರಾಲು ಮಣ್ಣಿನ ಅರಮನೆಗಳ ಸಂರಕ್ಷಣಾ ಕಾಮಗಾರಿಗಳಲ್ಲಿ ಅವ್ಯವಹಾರ ಮತ್ತು ಹಣ ದುರುಪಯೋಗ ಮಾಡಿಕೊಂಡ ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆರು ಅಧಿಕಾರಿಗಳನ್ನು ಕಡ್ಡಾಯ ನಿವೃತ್ತಿಗೊಳಿಸಲು ಹಾಗೂ ಅಧಿಕಾರಿಗಳಿಂದ ಸರ್ಕಾರಕ್ಕೆ ಉಂಟಾದ ಆರ್ಥಿಕ ನಷ್ಟವನ್ನು ಅವರಿಂದಲೇ ವಸೂಲು ಮಾಡಲು ಸಚಿವ ಸಂಪುಟ ಸಮ್ಮತಿ ನೀಡಿದೆ ಎಂದು ಸಚಿವರು ಮಾಹಿತಿ ನೀಡಿದರು.

****************

ಡಿ ಪಿ ಎಂ